ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ನಂ 16 ಸಿ, ಮಿಲ್ಲರ್ ಟ್ಯಾಂಕ್ ಬೆಡ್ ರಸ್ತೆ
ವಸಂತನಗರ. ಬೆಂಗಳೂರು -560 052.

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618
Email:directorgokdom@gmail.com
Web: www.gokdom.kar.nic.in

ಸಂಖ್ಯೆ:ಅಸಂನಿ/ಅ/ಬಿಎಡ್&ಡಿಎಡ್/ಸಿಆರ್-01(1)/2023-24 ದಿನಾಂಕ:18.08.2023

ಗೆ,
ಜಿಲ್ಲಾ ಅಧಿಕಾರಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
................................... ಜಿಲ್ಲೆ

ಮಾನ್ಯರೆ,

ವಿಷಯ:- 2023-24ನೇ ಸಾಲಿನಲ್ಲಿ ಬಿ.ಎಡ್ & ಡಿ.ಎಡ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ ನೀಡಲು ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿಯನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 279 ಎಂಡಿಎಸ್ 2018, ದಿ: 15.10.2018.

**********

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶದಲ್ಲಿ 2023-24ನೇ ಸಾಲಿನಲ್ಲಿ ಬಿ.ಎಡ್ & ಡಿ.ಎಡ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ ನೀಡುವ ಕಾರ್ಯಕ್ರಮವನ್ನು ಜಾರಿಗೊಳಿಸಲು ಆದೇಶಿಸಲಾಗಿದೆ. 2022-23ನೇ ಸಾಲಿನಲ್ಲಿ ಸೇವಾಸಿಂಧು ಪೋರ್ಟಲ್‌ನ ಆನ್‌ಲೈನ್‌ನಲ್ಲಿ (**https://sevasindhu.karnataka.gov.in**) ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆದ್ದರಿಂದ, ತಮ್ಮ ಜಿಲ್ಲೆಗಳಲ್ಲಿ ಸದರಿ ಕಾರ್ಯಕ್ರಮಕ್ಕಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ವ್ಯಾಪಕ ಪ್ರಚಾರ ನೀಡಿ ಅರ್ಜಿಗಳನ್ನು ಅಹ್ವಾನಿಸಲು ತಿಳಿಸಿದೆ.

**ಷರತ್ತುಗಳು:-**

1) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 279 ಎಂಡಿಎಸ್ 2018, ದಿನಾಂಕ: 15.10.2018.ರಲ್ಲಿ ನೀಡಲಾಗಿರುವ ಮಾರ್ಗಸೂಚಿಯನ್ವಯ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.
2) **ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 279 ಎಂಡಿಎಸ್ 2018, ದಿ: 15.10.2018.ರ ಮಾರ್ಗಸೂಚಿಯಂತೆ** ಗ್ರಾಮೀಣ ಮತ್ತು ನಗರ ವಿಭಾಗದಲ್ಲಿ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಿ ಕಲಿಕಾ ಮತ್ತು ಭೋಧನಾ ಸಾಮಾಗ್ರಿಗಳನ್ನು ಖರೀದಿಸಲು ಆರ್ಥಿಕ ಸಹಾಯ ಮಾಡುವ ಹಿತದೃಷ್ಟಿಯಿಂದ National Council for Teacher Education ನಿಂದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ Department of state Educational Research and Training ನಿಂದ ಮಾನ್ಯತೆ ಪಡೆದಿರುವ ಡಿ.ಎಡ್ ಕೋರ್ಸ್‌ಗಳ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್ & ಡಿ.ಎಡ್ ಕೋರ್ಸ್‌ಗಳಲ್ಲಿ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರಬೇಕು.

3) ವಿದ್ಯಾರ್ಥಿಯು ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್ , ಬೌದ್ಧ ಮತ್ತು ಪಾರ್ಸಿ ಸಮುದಾಯಗಳಿಗೆ ಸೇರಿದವರಾಗಿರಬೇಕು.

4) ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು.

5) ಸದರಿ ಕೋರ್ಸ್‌ಗಳ ಅವಧಿಗೆ ತಕ್ಕಂತೆ ಪ್ರತಿ ವರ್ಷ ರೂ.25,000/-ಸಾವಿರದಂತೆ (ಗರಿಷ್ಠ 2 ವರ್ಷ) ಅನುದಾನವನ್ನು ನೀಡಲಾಗುವುದು.

6) ಅಲ್ಪಸಂಖ್ಯಾತರ ಅಭ್ಯರ್ಥಿಗಳ ಪೋಷಕರ ವಾರ್ಷಿಕ ಗರಿಷ್ಠ ವರಮಾನ ರೂ. 6.00 ಲಕ್ಷಕ್ಕೆ ಮೀರಿರಬಾರದು.

7) ಅಭ್ಯರ್ಥಿಗಳನ್ನು ಅರ್ಹತೆ ಪರೀಕ್ಷೆ/ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡತಕ್ಕದ್ದು.

8) ಆಯಾ ವರ್ಷದಲ್ಲಿ ಲಭ್ಯವಿರುವ ಅನುದಾನಕ್ಕೆ ಸೀಮಿತಗೊಳಿಸಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು.

9) ಈ ಪ್ರೋತ್ಸಾಹಧನ ಪಡೆಯುವ ವಿದ್ಯಾರ್ಥಿಗಳು ಭಾರತ ಸರ್ಕಾರ ಅಥವಾ ಇತರೆ ವಿದ್ಯಾರ್ಥಿವೇತನ/ಶಿಷ್ಯವೇತನ ಪಡೆಯಲು ಅರ್ಹರಿರುತ್ತಾರೆ.

10) ಈ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳು ಸರ್ಕಾರಿ/ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ನಿಯಮಾನುಸಾರ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.

11) ವಿದ್ಯಾರ್ಥಿಗಳು ಡಿ.ಎಡ್ ಮತ್ತು ಬಿ.ಎಡ್ ಕೋರ್ಸ್‌ಗಳಲ್ಲಿ ದಾಖಲಾಗಿರುವ ಹಾಗೂ ಶುಲ್ಕವನ್ನು ಭರಿಸಿರುವ ಬಗ್ಗೆ ಎಲ್ಲಾ ಅಧಿಕೃತ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.

12) National Council for Teacher Education ನಿಂದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ Department of state Educational Research and Training ನಿಂದ ಮಾನ್ಯತೆ ಪಡೆದಿರುವ ಡಿ.ಎಡ್ ಕೋರ್ಸ್‌ಗಳ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿರುವ ವಿದ್ಯಾರ್ಥಿಗಳು ಮಾತ್ರ ಅರ್ಹರಿರುತ್ತಾರೆ.

13) ಸದರಿ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಅರ್ಹತೆ ಪರೀಕ್ಷೆ/ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಕನಿಷ್ಠ 50% ರಷ್ಟು ಅಂಕಗಳನ್ನು ಪಡೆದಿರತಕ್ಕದ್ದು. ಉತ್ತೀರ್ಣರಾಗದ ಅಭ್ಯರ್ಥಿಗಳು ಪ್ರೋತ್ಸಾಹಧನ ಪಡೆಯಲು ಅರ್ಹರಾಗಿರುವುದಿಲ್ಲ.

14) ಮೊದಲನೇ ವರ್ಷದಲ್ಲಿ ಪ್ರೋತ್ಸಾಹಧನ ಪಡೆದಿರುವ ಅಭ್ಯರ್ಥಿಗಳು ಎರಡನೇ ವರ್ಷಕ್ಕೆ ಪ್ರೋತ್ಸಾಹಧನ ಪಡೆಯಲು ಪ್ರತ್ಯೇಕ ಅರ್ಜಿ ಸಲ್ಲಿಸತಕ್ಕದ್ದು.
ಪ್ರತಿಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನದಲ್ಲಿ ಕನಿಷ್ಠ ಶೇಕಡ 50% ರಷ್ಟು ಬಾಲಕಿಯರಿಗೆ ಮೀಸಲಿರಿಸತಕ್ಕದ್ದು ಹಾಗೂ **ಡಿ.ಎಡ್ ಕೋರ್ಸಿಗೆ ಶೇಕಡ 25%ರಷ್ಟು** ಮತ್ತು ಬಿ.**ಎಡ್ ಕೋರ್ಸಿನ ಅಭ್ಯರ್ಥಿಗಳಿಗೆ ಶೇಕಡ 75%ರಷ್ಟು** ಅನುಪಾತದಲ್ಲಿ ಉಪಯೋಗಿಸುವುದು.

15) ಸುಳ್ಳು ಮಾಹಿತಿ, ದಾಖಲಾತಿ/ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಧನ ಪಡೆದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೀಡಲಾದ ಪ್ರೋತ್ಸಾಹಧನ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

16) ಈ ಯೋಜನೆಯಡಿ ಪ್ರೋತ್ಸಾಹಧನ ಪಡೆದ ವಿದ್ಯಾರ್ಥಿಗಳು ಡಿ.ಎಡ್ ಮತ್ತು ಬಿ.ಎಡ್ ಕೋರ್ಸ್ ಪೂರ್ಣಗೊಳಿಸದೇ ಮಧ್ಯದಲ್ಲಿ ಬಿಟ್ಟು ಹೋದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ವಿಚಾರಣೆ ನಡೆಸಿ ಇಲಾಖೆಯ ಮುಖ್ಯಸ್ಥರಿಗೆ ವರದಿ ಸಲ್ಲಿಸತಕ್ಕದ್ದು. ಅಂತಹ ಪ್ರಕರಣಗಳನ್ನು ಪರಿಶೀಲಿಸಿ ಇಲಾಖಾ ಮುಖ್ಯಸ್ಥರು ಅಂತಿಮ ನಿರ್ಣಯ ತೆಗೆದುಕೊಳ್ಳತಕ್ಕದ್ದು.

ಒಂದು ಪಕ್ಷ ಸಮಂಜಸವಾದ ಕಾರಣವಿಲ್ಲದಿದ್ದಲ್ಲಿ ಸಂಬಂಧಪಟ್ಟ ಅಭ್ಯರ್ಥಿಗಳಿಗೆ ನೀಡಲಾದ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

17) ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು ಈ ಯೋಜನೆಯಡಿ ಆರ್ಥಿಕ ಸಹಾಯ ಮಂಜೂರು ಮಾಡಿ ವಿತರಿಸುವ ಅಧಿಕಾರ ಹೊಂದಿರುತ್ತಾರೆ. ಅರ್ಹ ವಿದ್ಯಾರ್ಥಿಗಳ ಮೂಲ ದಾಖಲೆ, ಕಾಲೇಜುಗಳ ವಿವರ ಹಾಗೂ ಇತರೆ ಮಾಹಿತಿಯನ್ನು ಜಿಲ್ಲಾ ಕಛೇರಿಯಲ್ಲಿಯೇ ಕಾಪಾಡಿ ಪ್ರತ್ಯೇಕ ರಿಜಿಸ್ಟರ್‌ನಲ್ಲಿ ನಿರ್ವಹಿಸತಕ್ಕದ್ದು. ಸಂಬಂಧಪಟ್ಟ ದಾಖಲೆಗಳನ್ನು ರಾಜ್ಯ ಮಟ್ಟದ ಅಧಿಕಾರಿಗಳು/ಲೆಕ್ಕ ಪರಿಶೋಧನಾ ತಂಡದವರ ಬೇಡಿಕೆಯನುಸಾರ ತಪಾಸಣೆಗೆ ಸಲ್ಲಿಸತಕ್ಕದ್ದು.

18) ಎಲ್ಲಾ ಅರ್ಜಿಗಳನ್ನು ಕಡ್ಡಾಯವಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಸ್ವೀಕರಿಸಬೇಕು.

19) ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ಸಂಖ್ಯೆ:-**8277799990** ಸಂಪರ್ಕಿಸುವುದು.

20) ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಹಣ ಸಂದಾಯ ಯೋಜನೆ(DBT) ಮುಂಖಾತರ ಹಣ ವರ್ಗಾವಣೆ ಮಾಡಲು ಕ್ರಮವಹಿಸುವುದು.

21) ಪತ್ರಿಕಾ ಪ್ರಕಟಣೆಯನ್ನು ಈ ಕೆಳಕಂಡ ವೇಳಾಪಟ್ಟಿಯಂತೆ ನಿರ್ವಹಿಸುವುದು.

| | | |
|---|---|---|
| 1) | ಅರ್ಜಿ ಸಲ್ಲಿಸಲು ಪ್ರಾರಂಭಿಸುವ ದಿನಾಂಕ | 21.08.2023 |
| 2) | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 21.09.2023 |
| 3) | ಅರ್ಜಿಗಳ ಪರಿಶೀಲನೆ, ಗಣಕಯಂತ್ರದಲ್ಲಿ ಅಳವಡಿಸುವುದು ಮತ್ತು ಅರ್ಹ ಅರ್ಜಿಗಳ ಪಟ್ಟಿ ತಯಾರಿಸಲು ಕೊನೆಯ ದಿನಾಂಕ | 26.09.2023 |
| 4) | ವಿದ್ಯಾರ್ಥಿಗಳಿಗೆ ಅನುದಾನ ಬಿಡುಗಡೆ ಮಾಡಲು ಕೊನೆಯ ದಿನಾಂಕ | 05.10.2023 |

22) ಅನುದಾನ ಲಭ್ಯತೆಯನುಸಾರ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

**ತಮ್ಮ ವಿಶ್ವಾಸಿ,**

18/8

**ನಿರ್ದೇಶಕರು,**
**ಅಲ್ಪಸಂಖ್ಯಾತರ ನಿರ್ದೇಶನಾಲಯ,**
**ಬೆಂಗಳೂರು.**